# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 14.06.2011**

ಇಂದು ಪೂಜ್ಯ ಮಹಾಪೌರರಾದ ಶ್ರೀಮತಿ ಶಾರದಮ್ಮ ರವರು ಆಯುಕ್ತರೊಂದಿಗೆ ನಗರದ ರಾಮಸ್ವಾಮಿಪಾಳ್ಯ, ಕಾವಲ್ ಭೈರಸಂದ್ರ, ರೋಷನ್‌ನಗರ, ಮುನಿರೆಡ್ಡಿಪಾಳ್ಯ, ನಾಗವಾರ ಮತ್ತಿತರ ಪ್ರದೇಶಗಳಿಗೆ ಭೇಟಿ ನೀಡಿ, ಅಲ್ಲಿನ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿದರು.

ನಗರದಲ್ಲಿ ಮೂಲಭೂತ ಸೌಕರ್ಯಗಳಿಗೆ ಹೆಚ್ಚು ಒತ್ತು ನೀಡಲಾಗುವುದು ಎಂದು ತಿಳಿಸಿದ ಪೂಜ್ಯ ಮಹಾಪೌರರು, ಮಳೆಗಾಲದಲ್ಲಿ ಉಂಟಾಗಬಹುದಾದ ಅನಾಹುತಗಳನ್ನು ತಪ್ಪಿಸಲು ಪಾಲಿಕೆ ಸನ್ನದ್ಧವಾಗಿದ್ದು, ನಗರದ ಎಲ್ಲಾ ವಾರ್ಡ್‌ಗಳಲ್ಲೂ ತಕ್ಷಣದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಸಂಬಂಧ ಸಮಗ್ರ ವರದಿ ನೀಡಲು ಸಂಬಂಧಪಟ್ಟ ಅಭಿಯಂತರರುಗಳಿಗೆ ಸೂಚನೆ ನೀಡಲಾಗಿದೆ. ಅವರು ವರದಿ ನೀಡಿದ ನಂತರ ಆದ್ಯತೆಯ ಆಧಾರದ ಮೇಲೆ ಎಲ್ಲಾ ವಾರ್ಡ್‌ಗಳಲ್ಲಿ ಕಾಮಗಾರಿಗಳನ್ನು ಆರಂಭಿಸಲಾಗುವುದು ಎಂದು ತಿಳಿಸಿದರು.

ಮಳೆಗಾಲ ಆರಂಭವಾಗುವುದರೊಳಗೆ ಎಲ್ಲಾ ರಾಜಕಾಲುವೆಗಳು, ಒಳಚರಂಡಿಗಳಲ್ಲಿ ಹೂಳು ತೆಗೆದು ಸ್ವಚ್ಛಗೊಳಿಸಿ, ಮಳೆಗಾಲದಲ್ಲಿ ಯಾವುದೇ ಅನಾಹುತ ಉಂಟಾಗದಂತೆ ಎಚ್ಚರ ವಹಿಸಲಾಗುವುದು ಮತ್ತು ರಾಜಕಾಲುವೆ ಒತ್ತುವರಿಯಾಗಿದ್ದಲ್ಲಿ ಅದನ್ನು ತೆರವುಗೊಳಿಸಲಾಗುವುದು. ಮಳೆಗಾಲದ ಸಂದರ್ಭದಲ್ಲಿ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಅಭಿಯಂತರರುಗಳಿಗೆ ಈಗಾಗಲೇ ಸೂಚನೆ ನೀಡಿರುವುದಾಗಿ ಪೂಜ್ಯ ಮಹಾಪೌರರು ತಿಳಿಸಿದರು.

ರಾಮಸ್ವಾಮಿಪಾಳ್ಯದ ಚಿನ್ನಪ್ಪ ಗಾರ್ಡನ್‌ನಲ್ಲಿ ಶೇಕಡ 22.75ರ ಕಾರ್ಯಕ್ರಮದಡಿ 200 ಮನೆಗಳನ್ನು ನಿರ್ಮಿಸುವಂತೆ ಸ್ಥಳೀಯ ಪಾಲಿಕೆ ಸದಸ್ಯರಾದ ಶ್ರೀ ಚಂದ್ರು ಮಾಡಿದ ಮನವಿಗೆ ಆಯುಕ್ತರು ಒಪ್ಪಿಗೆ ನೀಡಿ, ಸದರಿ 200 ಮನೆಗಳನ್ನು ನಿರ್ಮಿಸಿಕೊಡುವ ಸಂಬಂಧ ಈಗಾಗಲೇ ಸಂಬಂಧಪಟ್ಟ ಸ್ಥಾಯಿ ಸಮಿತಿ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿದೆ ಎಂದು ತಿಳಿಸಿ, ಈ ಭಾಗದಲ್ಲಿ 200 ಮನೆಗಳು ಸಾಕಾಗದಿದ್ದರೆ ಇನ್ನೂ ಹೆಚ್ಚಿನ ಮನೆಗಳನ್ನು ನಿರ್ಮಿಸಿಕೊಡುವುದಕ್ಕೆ ಪಾಲಿಕೆ ಸಿದ್ಧವಿದೆ ಎಂದು ಆಯುಕ್ತರು ಭರವಸೆ ನೀಡಿದರು.

ಚಿನ್ನಪ್ಪ ಗಾರ್ಡನ್‌ನ ಪ್ರದೇಶದಲ್ಲಿರುವ ಶೌಚಾಲಯ ಕಟ್ಟಡವನ್ನು ಪರಿಶೀಲಿಸಿದ ಆಯುಕ್ತರು ಈ ಕಟ್ಟಡ ಚೆನ್ನಾಗಿದ್ದು, ಇರುವ ಅವ್ಯವಸ್ಥೆಯನ್ನು ಸರಿಪಡಿಸಲಾಗುವುದು. ಕಟ್ಟಡವನ್ನು ಕೆಡವಿ ಹಾಕುವ ಬದಲು ನವೀಕರಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ಸಂಪರ್ಕ ಕೇಂದ್ರದಲ್ಲಿ ಇನ್ನು ಬಾಗಿಲು ಅಳವಡಿಸದೇ ಇರುವುದನ್ನು ಗಮನಿಸಿದ ಆಯುಕ್ತರು ತಕ್ಷಣವೇ ಸರಿಪಡಿಸಿ, ಇಲ್ಲಿ ಅನಧಿಕೃತವಾಗಿ ವಾಸ ಮಾಡುತ್ತಿರುವವರನ್ನು ಕೂಡಲೇ ಹೊರ ಹಾಕುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸ್ಥಳೀಯ ನಿವಾಸಿಗಳು ಇಲ್ಲಿರುವ ಕಟ್ಟಡವನ್ನು ಒಡೆದು ಹಾಕಿ ಸಮುದಾಯ ಭವನ ನಿರ್ಮಾಣ ಮಾಡಬೇಕು ಎಂದು ಮನವಿ ಮಾಡಿದಾಗ, ಸ್ಥಳೀಯರ ಒತ್ತಾಯಕ್ಕೆ ಪ್ರತಿಕ್ರಿಯಿಸಿದ ಆಯುಕ್ತರು ಸಂಪರ್ಕ ಕೇಂದ್ರವನ್ನು ಕೆಡವಿ ಹಾಕದೆ ಸಮುದಾಯ ಭವನವನ್ನು ನಿರ್ಮಿಸಬಹುದು ಎಂದರು.

ಈ ಸಂದರ್ಭದಲ್ಲಿ ಪುಲಿಕೇಶಿನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀ ಬಿ. ಪ್ರಸನ್ನಕುಮಾರ್, ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಆರ್. ನಂಜುಂಡಪ್ಪ, ಸ್ಥಳೀಯ ಪಾಲಿಕೆ ಸದಸ್ಯರಾದ ಶ್ರೀ ಸಂಪತ್ ರಾಜ್. ಆರ್, ಶ್ರೀಮತಿ ವೈ.ಆರ್. ಗೌರಮ್ಮ ಹಾಜರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 14.06.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ 40 ಮೈಕ್ರಾನ್‌ಗಿಂತ ಕಡಿಮೆ ಇರುವ ಪ್ಲಾಸ್ಟಿಕ್ ಬಳಕೆ ನಿಷೇಧಿಸಲಾಗಿದೆ. ಈ ಬಗ್ಗೆ ಸಾರ್ವಜನಿಕರು ಹಾಗೂ ವ್ಯಾಪಾರಸ್ಥರಿಗೂ ಕೂಡಾ ತಿಳುವಳಿಕೆ ನೀಡಲಾಗಿದೆ. ಆದರೂ ಕೆಲವು ಅಂಗಡಿಗಳಲ್ಲಿ 40 ಮೈಕ್ರಾನ್‌ಗಿಂತ ಕಡಿಮೆ ಇರುವ ಪ್ಲಾಸ್ಟಿಕ್ ಬಳಸಲಾಗುತ್ತಿದೆ ಎಂಬ ಖಚಿತ ಮಾಹಿತಿಯೊಂದಿಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪಶ್ಚಿಮ ವಲಯದ ಆರೋಗ್ಯ ಇಲಾಖೆ ಸಿಬ್ಬಂದಿಯವರು ಇಂದು ಬಿ.ವಿ.ಕೆ. ಅಯ್ಯಂಗಾರ್ ರಸ್ತೆ ಮತ್ತು ಸುತ್ತಮುತ್ತಲಿನಲ್ಲಿರುವ ಮಳಿಗೆಗಳ ಮೇಲೆ ದಾಳಿ ನಡೆಸಿ, ಸುಮಾರು 900 ಕೆ.ಜಿ. 40 ಮೈಕ್ರಾನ್‌ಗಿಂತ ಕಡಿಮೆ ಇರುವ ಪ್ಲಾಸ್ಟಿಕ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಹಾಗೂ 5 ದೊಡ್ಡ ಗೋಡೌನ್‌ಗಳಲ್ಲಿ ಶೇಖರಿಸಿಟ್ಟಿದ್ದ ಸುಮಾರು 500 ಕೆ.ಜಿ. 40 ಮೈಕ್ರಾನ್‌ಗಿಂತ ಕಡಿಮೆ ಇರುವ ಪ್ಲಾಸ್ಟಿಕ್‌ಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದ್ದು, ತಲಾ 10,000/- ರೂ.ಗಳಂತೆ ರೂ.50,000/- ಗಳ ದಂಡ ವಿಧಿಸಲಾಗಿದೆ ಎಂದು ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**